ಕರ್ನಾಟಕ ಸರ್ಕಾರ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ. ದೇವರಾಜ ಅರಸು ಭವನ,
ಮಿಲ್ಲರ್ಸ್ ಕೆರೆ ಅಂಗಳ, ವಸಂತನಗರ, ಬೆಂಗಳೂರು-52.

# ವಿದ್ಯಾರ್ಥಿಗಳಿಗೆ ಸೂಚನೆಗಳು (Instructions to Candidates)

2019-20ನೇ ಸಾಲಿಗೆ ರಾಜ್ಯದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ NEET ಹಾಗೂ JEE (ADVANCED & MAINS) ಪರೀಕ್ಷಾ ಪೂರ್ವ ತರಬೇತಿಯನ್ನು ನೀಡುತ್ತಿದ್ದು, ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳಿಂದ Online ಮೂಲಕ ಅರ್ಜಿ ಆಹ್ವಾನ

(ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅಲ್ಪಸಂಖ್ಯಾತ ಅಭ್ಯರ್ಥಿಗಳು ಈ ಇಲಾಖೆಯಿಂದ ನೀಡುವ ತರಬೇತಿಗೆ ಅರ್ಜಿ ಸಲ್ಲಿಸಲು ಅವಕಾಶ ಇರುವುದಿಲ್ಲ)

ಸಂಖ್ಯೆ:ಹಿಂವಕಇ/ತರಬೇತಿ-4/ಸಿಇಟಿ/ಸಿಆರ್-8/2019-20 ದಿನಾಂಕ:25.09.2019

1. ಅಭ್ಯರ್ಥಿಯು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿದ್ದು, ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಅಥವಾ 3(ಬಿ) ಗೆ ಸೇರಿರಬೇಕು.

2. ತರಬೇತಿಯನ್ನು ಬೆಂಗಳೂರು ನಗರ, ಬೆಳಗಾವಿ, ಕಲಬುರ್ಗಿ, ಮೈಸೂರು, ದಕ್ಷಿಣ ಕನ್ನಡ ಮತ್ತು ಧಾರವಾಡ ಜಿಲ್ಲಾ ಕೇಂದ್ರಗಳಲ್ಲಿ ಮಾತ್ರ ನೀಡಲು ಉದ್ದೇಶಿಸಿದ್ದು, ಈ ಮೇಲ್ಕಂಡ ಜಿಲ್ಲಾ ಕೇಂದ್ರಗಳಲ್ಲಿ ಪ್ರಥಮ ಪಿ.ಯು.ಸಿ/10+1 ವ್ಯಾಸಂಗ ಮಾಡುತ್ತಿರುವ (ವಿಜ್ಞಾನ ವಿಭಾಗದಲ್ಲಿ) ವಿದ್ಯಾರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.

3. ಅಭ್ಯರ್ಥಿ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿ ರೂ.6.00 ಲಕ್ಷಗಳು

4. <u>ವಿದ್ಯಾರ್ಹತೆ:-</u>

5. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸದರಿ ಪರೀಕ್ಷಾ ಪೂರ್ವ ತರಬೇತಿಗಳನ್ನು ಪಡೆಯಲು ಇಚ್ಛಿಸುವ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ/10ನೇ ತರಗತಿ ಪೂರ್ಣಗೊಳಿಸಿರಬೇಕು. ತರಬೇತಿಗೆ ಎಸ್.ಎಸ್.ಎಲ್.ಸಿ/10ನೇ ತರಗತಿಯಲ್ಲಿ ಗಳಿಸಿರುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

6. ಅರ್ಹ ಆಸಕ್ತ ವಿದ್ಯಾರ್ಥಿಗಳು online ಮೂಲಕವೇ ಅರ್ಜಿಗಳನ್ನು ಸಲ್ಲಿಸುವುದು. ಬೇರೆ ಯಾವ ಪ್ರಕಾರಗಳಲ್ಲೂ ಸಲ್ಲಿಸುವ ವಿದ್ಯಾರ್ಥಿಯ ಅರ್ಜಿಯನ್ನಾಗಲಿ ಅಥವಾ ಮನವಿಯನ್ನಾಗಲಿ ಪರಿಗಣಿಸಲಾಗುವುದಿಲ್ಲ.

7. ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ:15.10.2019ಕ್ಕೆ ವಿದ್ಯಾರ್ಥಿಯು 20 ವರ್ಷ ಮತ್ತು ಅದಕ್ಕೂ ಕಡಿಮೆ ವಯೋಮಿತಿ ಹೊಂದಿರಬೇಕು.

8. CBSE ಮತ್ತು ICSE ಹಾಗೂ ಇತರೆ ರಾಜ್ಯಗಳಲ್ಲಿ (1 ರಿಂದ 10ನೇ ತರಗತಿಯ ವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ್ದಲ್ಲಿ ಮಾತ್ರ) ಹತ್ತನೇ ತರಗತಿಯಲ್ಲಿ ಉತ್ತೀರ್ಣರಾಗಿರುವ ಮತ್ತು ಸದರಿ ಕಾರ್ಯಕ್ರಮದಡಿ ತರಬೇತಿಗೆ ಅರ್ಹರಿರುವ ವಿದ್ಯಾರ್ಥಿಗಳು ತಮ್ಮ ಹತ್ತನೇ ತರಗತಿಯ ಮೂಲ ಅಂಕಪಟ್ಟಿಯೊಂದಿಗೆ ಹತ್ತಿರದ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಭೇಟಿ ನೀಡಿ ಅಂಕಪಟ್ಟಿಯ ವಿವರವನ್ನು entry ಮಾಡಿಸಿ, ನಂತರ ಅರ್ಜಿ ಸಲ್ಲಿಸುವುದು.

9. ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗಳ ವಿಳಾಸದ ವಿವರಗಳು ಇಲಾಖಾ ವೆಬ್‌ಸೈಟ್‌ನಲ್ಲಿ ಲಭ್ಯವಿರುತ್ತದೆ.

10. **ತರಬೇತಿಯ ಪಠ್ಯಕ್ರಮ, ತರಬೇತಿ ಅವಧಿ:** ಪ್ರಥಮ ವರ್ಷದಲ್ಲಿ ತರಬೇತಿಗೆ ಆಯ್ಕೆಯಾಗುವ ವಿದ್ಯಾರ್ಥಿಗೆ ಪ್ರಥಮ/10+1 ಹಾಗೂ ದ್ವಿತೀಯ ಪಿ.ಯು.ಸಿ/10+2ಗೆ ಸಂಬಂಧಿಸಿದಂತೆ ಪರೀಕ್ಷಾ ಪೂರ್ವ ತರಬೇತಿ ನೀಡಲಾಗುವುದು.

11. ವಿದ್ಯಾರ್ಥಿಯ ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರ ಹಾಗೂ ಅದರ ಕೆಳಗೆ ವಿದ್ಯಾರ್ಥಿಯ ಸಹಿ ಬರುವಂತೆ JPEG/JPG format (15 ರಿಂದ 30 kilo byte ಗೆ ಒಳಪಟ್ಟು) ನಲ್ಲಿ Upload ಮಾಡಬೇಕು.

12. ಅದೇ ರೀತಿ ಅರ್ಜಿಯಲ್ಲಿ ಅಪ್ ಲೋಡ್ ಮಾಡಲು ತಿಳಿಸಿರುವ ಪ್ರತಿ ದಾಖಲೆಗಳನ್ನು JPEG/JPG format (200 ರಿಂದ 250 kilo byte ಗೆ ಒಳಪಟ್ಟು) ನಲ್ಲಿ Upload ಮಾಡಬೇಕು.

13. ವಿದ್ಯಾರ್ಥಿಯು ಅಂತಿಮವಾಗಿ ಅರ್ಜಿಯನ್ನು submit ಮಾಡುವ ಮುನ್ನ ಎಲ್ಲಾ ಅಂಶಗಳೂ ಸರಿಯಾಗಿರುವ ಬಗ್ಗೆ Preview ನೋಡಿ ಖಚಿತ ಪಡಿಸಿಕೊಳ್ಳಬೇಕು. ಸರಿಯಾಗಿ ಭರ್ತಿ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

14. ವಿದ್ಯಾರ್ಥಿಯು ತಪ್ಪು ಮಾಹಿತಿ ನೀಡಿರುವುದು/ಅನರ್ಹ ವಿದ್ಯಾರ್ಥಿಯೆಂದು ಯಾವುದೇ ಹಂತದಲ್ಲಿ ಕಂಡು ಬಂದಲ್ಲಿ, ಅಂತಹ ವಿದ್ಯಾರ್ಥಿಯ ವಿರುದ್ಧ ನಿಯಮಾನುಸಾರ ಸೂಕ್ತ ಕ್ರಮ ಜರುಗಿಸಲಾಗುವುದು.

15. ಅರ್ಜಿಯ ಪ್ರತಿಯನ್ನು Print option ನೀಡುವ ಮೂಲಕ ಪಡೆಯಬಹುದು.

16. ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ ನಂತರ ಅರ್ಜಿಯ ಒಂದು ಪ್ರತಿ ಮತ್ತು ಅಪ್ ಲೋಡ್ ಮಾಡಲು ತಿಳಿಸಿರುವ ಎಲ್ಲಾ ದಾಖಲೆಗಳ ಒಂದು ಸೆಟ್ ದೃಢೀಕೃತ ಪ್ರತಿ ಹಾಗೂ ಅವುಗಳ ಮೂಲ ಪ್ರತಿಯೊಂದಿಗೆ ತಾನು ಪ್ರಥಮ ಪಿ.ಯು.ಸಿ/10+1 ಓದುತ್ತಿರುವ ಜಿಲ್ಲೆಯಲ್ಲಿರುವ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಸಲ್ಲಿಸುವುದು. ದಾಖಲೆಗಳ ಪರಿಶೀಲನೆಯ ನಂತರ ಒಂದು ಸೆಟ್ ದೃಢೀಕೃತ ಪ್ರತಿಯನ್ನು ಮಾತ್ರ ಸಂಬಂಧಿಸಿದ ಕಛೇರಿಯಲ್ಲಿ ನೀಡುವುದು ಹಾಗೂ ಮೂಲ ದಾಖಲೆಗಳನ್ನು ವಿದ್ಯಾರ್ಥಿಗಳು ಸ್ಥಳದಲ್ಲಿಯೇ ಹಿಂದಿರುಗಿ ಪಡೆಯಲು ತಿಳಿಸಿದೆ.

17. ಭೌತಿಕ ಗುರಿಯನ್ನು ಅನುದಾನ ಲಭ್ಯತೆಗನುಗುಣವಾಗಿ ನಿಗದಿಪಡಿಸಲಾಗುವುದು. ಪ್ರವರ್ಗವಾರು ಮೀಸಲಾತಿ ಈ ಕೆಳಗಿನಂತಿರುತ್ತದೆ.

| ಕ್ರ.ಸಂ. | ಪ್ರವರ್ಗ | ಶೇಕಡ |
|---|---|---|
| 1 | 1 | 15% |
| 2 | 2ಎ | 53% |
| 3 | 3ಎ | 15% |
| 4 | 3ಬಿ | 17% |
| | ಒಟ್ಟು | 100% |

ಯಾವುದೇ ಪ್ರವರ್ಗದಲ್ಲಿ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಉಳಿಕೆಯಾಗುವ ಸ್ಥಾನಗಳನ್ನು ಮೀಸಲಾತಿಯನ್ವಯ ಉಳಿದ ಪ್ರವರ್ಗಗಳಿಗೆ ಮರು ಹಂಚಿಕೆ ಮಾಡಲಾಗುವುದು.

18. ತರಬೇತಿಯನ್ನು ಮಧ್ಯಂತರದಲ್ಲಿ ಬಿಟ್ಟು ಹೋಗುವ/ತರಬೇತಿಯನ್ನು ಪೂರ್ಣಗೊಳಿಸದ ಅಭ್ಯರ್ಥಿಗಳಿಂದ ಅವರ ತರಬೇತಿಗೆ ಆಗಿರುವ ಖರ್ಚು ವೆಚ್ಚವನ್ನು ವಸೂಲಾತಿ ಮಾಡಲಾಗುವುದು.
19. Online ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:15.10.2019 ಸಂಜೆ 5:00 ಗಂಟೆ.

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.